ಪತ್ರಿಕಾ ಪ್ರಕಟಣೆ - PRESS RELEASE

**ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ**
**RESERVE BANK OF INDIA**

ಜಾಲತಾಣ : www.rbi.org.in
Website : www.rbi.org.in
ಇಮೇಲ್ /email : helpdoc@rbi.org.in

**ಸಂವಹನ ಇಲಾಖೆ, ಕೇಂದ್ರ ಕಚೇರಿ, ಶಾಹಿದ್ ಭಗತ್ ಸಿಂಗ್ ಮಾರ್ಗ, ಫೋರ್ಟ್, ಮುಂಬೈ-400001 ಫೋನ್/ಫೋನ್: 022- 22660502**

**Department of Communication, Central Office, Shahid Bhagat Singh Marg, Fort, Mumbai-400001 फोन/Phone: 022- 22660502**

26 ಡಿಸೆಂಬರ್ 2024

# ಪತ್ರಿಕಾ ಪ್ರಕಟಣೆ

## ಶ್ರೀ ಬಸವೇಶ್ವರ ಪಟ್ಟಣ ಸಹಕಾರ ಬ್ಯಾಂಕ್ ನಿಯಮಿತ, ಸಿಂದಗಿ , ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ

ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಡಿಸೆಂಬರ್ 18, 2024 ರ ಆದೇಶದ ಮೂಲಕ ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ಅಡಿಯಲ್ಲಿ ನೀಡಿದ ನಿರ್ದಿಷ್ಟ ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಶ್ರೀ ಬಸವೇಶ್ವರ ಪಟ್ಟಣ ಸಹಕಾರ ಬ್ಯಾಂಕ್ ನಿಯಮಿತ, ಸಿಂದಗಿ , ಕರ್ನಾಟಕ- ಈ ಬ್ಯಾಂಕಿಗೆ (ಬ್ಯಾಂಕು) ರೂ. 1,00,000/- ( ರೂ. ಒಂದು ಲಕ್ಷ ಮಾತ್ರ ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಏ(1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2023 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನ ಬದ್ಧ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾಡಲಾಯಿತು. ಆರ್ ಬಿ ಐ ನ ಶಾಸನಬದ್ಧ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮದ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು.. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಈ ಕೆಳಗಿನ ಆರೋಪ ಸ್ಥಿರಪಟ್ಟಿದೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

**ನಿಷ್ಕ್ರಿಯ ಆಸ್ತಿಗಳ ಮಟ್ಟವು ಹೆಚ್ಚಾಗಿದ್ದ ಕ್ಷೇತ್ರಗಳಿಗೆ ತನ್ನ ಅನಾವರಣವನ್ನು ಹೆಚ್ಚು ಮಾಡುವಾಗ ಬ್ಯಾಂಕು ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ನಿರ್ದೇಶನಗಳ ಅನುಪಾಲನೆ ಮಾಡಿರಲಿಲ್ಲ ಮತ್ತು ಭಾರತೀಯ ರಿಸರ್ವ್ ಬ್ಯಾಂಕಿನ ಪೂರ್ವಾನುಮತಿ ಪಡೆಯದೇ ಲಾಭಾಂಶ ಘೋಷಣೆ ಮಾಡಿತ್ತು.**

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಂಚೋಲಿ)**
**ಮುಖ್ಯ ಮಹಾ ವ್ಯವಸ್ಥಾಪಕರು**

**ಪತ್ರಿಕಾ ಪ್ರಕಟಣೆ: 2024-25/1786**